## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: 2017-18ನೇ ಸಾಲಿನ ವಿಶೇಷ ಘಟಕ ಉಪಯೋಜನೆ ಮತ್ತು ಗಿರಿಜನ ಉಪಯೋಜನೆಯಡಿಯಲ್ಲಿ ವಸತಿ ಕಾರ್ಯಾಗಾರ ನಿರ್ಮಾಣ ಕಾರ್ಯಕ್ರಮವನ್ನು ವಸತಿ ಇಲಾಖೆ ಸಹಯೋಗದೊಂದಿಗೆ ಅನುಷ್ಠಾನಗೊಳಿಸುವ ಬಗ್ಗೆ.

ಓದಲಾಗಿದೆ: 1.ಆಯುಕ್ತರು, ಕೈಗಾರಿಕಾಭಿವೃದ್ಧಿ ಹಾಗೂ ನಿರ್ದೇಶಕರು, ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ ಬೆಂಗಳೂರು ಇವರ ಪತ್ರ ಸಂಖ್ಯೆ: ಕೈವಾಇ/ ಜಿಕೈಕೇ/ಸಿ2/20/ವಕಾ-ರಾ/2017-18, ದಿ:08.12.2017 ಮತ್ತು 25.01.2018.

2.ಸಮಾಜ ಕಲ್ಯಾಣ ಇಲಾಖೆಯ ಪತ್ರ ಸಂಖ್ಯೆ:ಸಕಇ 426 ಪಕಸೇ 2017 ದಿ:18.12.2017.

*****

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ಪತ್ರಗಳಲ್ಲಿ ಆಯುಕ್ತರು, ಕೈಗಾರಿಕಾಭಿವೃದ್ಧಿ ಹಾಗೂ ನಿರ್ದೇಶಕರು, ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ ಬೆಂಗಳೂರು ಇವರು ರಾಜ್ಯ ಅನುಸೂಚಿತ ಜಾತಿ/ ಅನುಸೂಚಿತ ಬುಡಕಟ್ಟು ಅಭಿವೃದ್ಧಿ ಪರಿಷತ್ ಸಮಿತಿ ಸಭೆಯಲ್ಲಿ ವೃತ್ತಿನಿರತ ವಸತಿ ರಹಿತ ಕುಶಲಕರ್ಮಿಗಳಿಗೆ ವಸತಿ ಕಾರ್ಯಾಗಾರಗಳನ್ನು ರಾಜೀವ್ ಗಾಂಧಿ ಗ್ರಾಮೀಣ ನಿಗಮದ ಮೂಲಕ ಕೈಗೊಳ್ಳಲು ಸಲ್ಲಿಸಿದ್ದ ಕ್ರಿಯಾ ಯೋಜನೆಯು ಅನುಮೋದನೆಗೊಂಡಿದ್ದು ಮತ್ತು ಘಟಕ ವೆಚ್ಚವನ್ನು ಹೆಚ್ಚಿಸಿದ್ದು, ಈ ಯೋಜನೆಗೆ ತಗಲುವ ಇಲಾಖೆ ಪಾಲಿನ ಅನುದಾನವನ್ನು "ಹೊಸ ಔದ್ಯಮಿಕ ಸಮೂಹಗಳ ಸ್ಥಾಪನೆ ಮತ್ತು ಸುಧಾರಣೆ" ಯೋಜನೆಯ ಲೆಕ್ಕಶೀರ್ಷಿಕೆ:2852-80-003-0-12-ರಡಿ ಭರಿಸಲು ಅಭಿವೃದ್ಧಿ ಪರಿಷತ್ ಸಮಿತಿಯು ಅನುಮೋದನೆ ನೀಡಿರುತ್ತದೆಂದು ತಿಳಿಸಿರುತ್ತಾರೆ.

ಮುಂದುವರೆದಂತೆ, 2017-18ನೇ ಸಾಲಿನ ವಿಶೇಷ ಘಟಕ ಉಪಯೋಜನೆ ಮತ್ತು ಗಿರಿಜನ ಉಪಯೋಜನೆಯಡಿಯಲ್ಲಿ ವಸತಿ ಕಾರ್ಯಾಗಾರ ನಿರ್ಮಾಣ ಕಾರ್ಯಕ್ರಮವನ್ನು ವಿಶೇಷ ಅಭಿವೃದ್ಧಿ ಯೋಜನೆಯ ತಾಲ್ಲೂಕುಗಳನ್ನೂ ಒಳಗೊಂಡಂತೆ, ರಾಜೀವ್ ಗಾಂಧಿ ಗ್ರಾಮೀಣ ವಸತಿ ನಿಗಮ ನಿಯಮಿತ ಸಹಯೋಗದೊಂದಿಗೆ ಅನುಷ್ಠಾನಗೊಳಿಸಲು ಪರಿಷ್ಕೃತ ಕರಡು ಮಾರ್ಗಸೂಚಿಯೊಂದಿಗೆ ವಸತಿ ಕಾರ್ಯಾಗಾರ ನಿರ್ಮಾಣದ ವೆಚ್ಚದಲ್ಲಿ ಇಲಾಖೆಯ ವಂತಿಕೆಯನ್ನು ರಾಜೀವ್ ಗಾಂಧಿ ಗ್ರಾಮೀಣ ನಿಗಮ ನಿಯಮಿತ ಬೆಂಗಳೂರು ಇವರಿಗೆ ಬಿಡುಗಡೆ ಮಾಡಲು ಹಾಗೂ ಆಡಳಿತಾತ್ಮಕ ಅನುಮೋದನೆ ನೀಡುವಂತೆ ಕೋರಿರುತ್ತಾರೆ.

13/03/18 13/03/2018.